ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 16–11–2021

# ಪತ್ರಿಕಾ ಪ್ರಕಟಣೆ

**PRESS RELEASE**

## ಮಾಧ್ಯಮ ಕ್ಷೇತ್ರ ಪ್ರಜಾಪ್ರಭುತ್ವದ "ನಾಲ್ಕನೇ ಅಂಗ"

– ವಾರ್ತಾ ಇಲಾಖೆ ಆಯುಕ್ತ ಜಿ. ಜಗದೀಶ್

ಬೆಂಗಳೂರು, ನವೆಂಬರ್ 16, (ಕರ್ನಾಟಕ ವಾರ್ತೆ) :

ನ್ಯಾಯಾಂಗ, ಕಾರ್ಯಾಂಗ ಮತ್ತು ಶಾಸಕಾಂಗಗಳಂತೆ ಪ್ರಜಾಪ್ರಭುತ್ವದ ಒಂದು ಪ್ರಮುಖ ಅಂಗವಾಗಿ ಮಾಧ್ಯಮವು ಕಾರ್ಯನಿರ್ವಹಿಸುತ್ತಿದೆ. ಅಂತೆಯೇ ಮಾಧ್ಯಮವನ್ನು "ನಾಲ್ಕನೇ ಅಂಗ ಎಂದು ಕರೆಯಲಾಗುತ್ತದೆ ಎಂದು ಮಾನ್ಯ ಮುಖ್ಯಮಂತ್ರಿಗಳ ಜಂಟಿ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಜಿ. ಜಗದೀಶ್ ಅವರು ತಿಳಿಸಿದರು.

ಇಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಚೇರಿಯಲ್ಲಿ, ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ "ಮಾಧ್ಯಮ ಕಂಡರೆ ಯಾರಿಗೆ ಭಯವಿಲ್ಲ?" ಎಂಬ ವಿಚಾರ ಸಂಕೀರಣ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ಮಾತನಾಡಿದ ಅವರು, ಮಾಧ್ಯಮ ಕ್ಷೇತ್ರ ನನ್ನ ಹೃದಯಕ್ಕೆ ಹತ್ತಿರವಾದ ವೃತ್ತಿ ನನ್ನ ಸೇವಾವಧಿಯಲ್ಲಿ ಹಲವಾರು ಪತ್ರಕರ್ತರ ಕಾರ್ಯಚಟುವಟಿಕೆಗಳನ್ನು ತೀರ ಹತ್ತಿರದಲ್ಲಿದ್ದು ಗಮನಿಸಿದ್ದೇನೆ. ಪತ್ರಕರ್ತರೊಡನೆ ಉತ್ತಮ ಒಡನಾಟ ಹಾಗೂ ಬಾಂಧವ್ಯವನ್ನು ಬೆಳೆಸಿ –ಉಳಿಸಿಕೊಂಡಿದ್ದೇನೆ. ಮಾಧ್ಯಮ ಮಿತ್ರರೊಂದಿಗೆ ಸುಮಾರು 14 ವರ್ಷಗಳ ನಿಕಟ ಸಂಪರ್ಕದಲ್ಲಿದ್ದು ಕಾರ್ಯ ನಿರ್ವಹಿಸುತ್ತಾ ಬಂದಿದ್ದೇನೆ. ಎಲ್ಲಿಯೂ ಅವರೊಂದಿಗೆ ಸಂಘರ್ಷ ಮಾಡಿಕೊಳ್ಳಲಿಲ್ಲ. ಮಾಧ್ಯಮದವರು ಕಷ್ಟದಲ್ಲಿದ್ದ ಸಮಯದಲ್ಲಿ ಅವರ ಕಷ್ಟಗಳಿಗೆ ಸ್ಪಂದಿಸಿದ್ದೇನೆ ಎಂದು ತಿಳಿಸಿದರು.

ಸರ್ಕಾರದ ಯಾವುದೇ ಯೋಜನೆಯಾಗಲಿ, ವಿಷಯಗಳಾಗಲಿ, ನೀತಿಗಳನ್ನಾಗಲಿ ತಿಳಿಸಬೇಕಾದ ಸಮಯದಲ್ಲಿ ತಕ್ಷಣ ಬಳಸಿಕೊಳ್ಳುವುದು ಮಾಧ್ಯಮಗಳನ್ನು ಮಾತ್ರ. ಸುದ್ದಿಗಳನ್ನು ಸಂಗ್ರಹಿಸಿ ಜನಸಮೂಹಕ್ಕೆ ತಲುಪಿಸುವ ಕಾಯಕವೇ ಮಾಧ್ಯಮದ ಉನ್ನತ ಧ್ಯೇಯವಾಗಿದೆ. ಮಾಧ್ಯಮದವರು ಪ್ರಮುಖವಾಗಿ ವಿಷಯ ಪ್ರಧಾನಕ್ಕೆ ಹೆಚ್ಚು ಗಮನ ನೀಡಬೇಕು. ನಿಖರವಾದ ಮಾಹಿತಿಯನ್ನು ಜನಸಾಮಾನ್ಯರಿಗೆ ತಲುಪಿಸಬೇಕು ಎಂದು ತಿಳಿಸಿದರು.

ಸರ್ಕಾರದ ರಚನಾತ್ಮಕ ಟೀಕಾಕಾರರು ಮಾಧ್ಯಮ ಮಿತ್ರರು. ಸರ್ಕಾರ ಹಳಿ ತಪ್ಪಿದಾಗ ಎಚ್ಚರಿಸುವ ಕೆಲಸವನ್ನು ಮಾಧ್ಯಮ ಮಿತ್ರರು ಮಾಡುತ್ತಾರೆ. ಅದೇ ರೀತಿ ಮಾಧ್ಯಮ ಮಿತ್ರರು ಸರ್ಕಾರದ ಟೀಕೆಗಳಿಗೆ ಹೆಚ್ಚು ಹೊತ್ತು ನೀಡದೇ, ಒಳ್ಳೆಯ ಕೆಲಸಗಳನ್ನು ಮಾಡಿದಂತಹ ಸಮಯದಲ್ಲೂ ಸಹ ಹೆಚ್ಚು ಪ್ರಚಾರ ನೀಡಬೇಕು ಆಗ ಮಾತ್ರ ಸಾರ್ವಜನಿಕರಲ್ಲಿ ಒಂದು ಒಳ್ಳೆಯ ಭಾವನೆ ಮೂಡುತ್ತದೆ. ಇದರಿಂದಾಗಿ ಸರ್ಕಾರವು ಉತ್ತಮವಾದ ಕೆಲಸಗಳನ್ನು ಇನ್ನೂ ಹೆಚ್ಚು ಹೆಚ್ಚಾಗಿ ನಿರ್ವಹಿಸಲು ಸ್ಫೂರ್ತಿಯಾಗುವುದು ಎಂದು ತಿಳಿಸಿದರು.

ಪ್ರಜಾತಾಂತ್ರಿಕ ಸಮಾಜದಲ್ಲಿ ಮಾಧ್ಯಮವು ಮುಕ್ತವಾಗಿಯೂ ಮತ್ತು ಜವಬ್ದಾರಿಯುತವಾಗಿಯೂ ನಡೆದುಕೊಳ್ಳುವಂತಿರಬೇಕು. ಸ್ವತಂತ್ರವಾಗಿ ಕಾರ್ಯ ನಿರ್ವಹಿಸುವ ಮಾಧ್ಯಮವೊಂದು ಎರಡು ಕರ್ತವ್ಯಗಳನ್ನು ನಿರ್ವಹಿಸಬೇಕಿರುತ್ತದೆ. ಆಡಳಿತಕ್ಕೆ ಸಂಬಂಧಪಟ್ಟ ವಿಷಯಗಳ ಬಗ್ಗೆ ಜನರು ತೀರ್ಮಾನಕ್ಕೆ ಬರಲು ಸಹಾಯವಾಗುವಂತೆ ಮಾಹಿತಿಗಳನ್ನು ತಲುಪಿಸುವುದು ಮತ್ತು ಜನರು ಅದರಲ್ಲೂ ತಮ್ಮ ಧ್ವನಿ ದುರ್ಬಲ ಎಂದು ಭಾವಿಸುವ ಜನವರ್ಗದ ದುಮನಗಳಿಗೆ ಮತ್ತು ಸಲಹೆಗಳಿಗೆ ವೇದಿಕೆಯಾಗುವುದು. ಮಾಧ್ಯಮಗಳ ವರದಿಗಳ ಆಧಾರದ ಮೇಲೆ ಎಷ್ಟೋ ಸುಧಾರಣೆಗಳು ಆಗುತ್ತದೆ. ಸಾಕಷ್ಟು ಕೆಲಸಗಳೂ ಸಹ ಆಗಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಖ್ಯಾತ ನಟ ರಮೇಶ್ ಅರವಿಂದ್, ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಕೆ. ಸದಾಶಿವ ಶೆಣೈ ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿಗಳಾದ ಸಿ. ರೂಪ, ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯರಾದ ಶಿವಾನಂದ ತಗಡೂರು ಸೇರಿದಂತೆ ಗಣ್ಯರು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಬೆಂಗಳೂರು ಟೆಕ್ ಸಮ್ಮಿಟ್–2021

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ):

ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಎಸ್‌ಟಿಪಿಐ–ಬೆಂಗಳೂರು ವತಿಯಿಂದ ಆಯೋಜಿಸಿರುವ ಬೆಂಗಳೂರು ಟೆಕ್ ಸಮ್ಮಿಟ್‌ನ 24ನೇ ಆವೃತ್ತಿಯ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದ್ದು, ನವೆಂಬರ್ 17 ರಿಂದ 19ರವರೆಗೆ ಬೆಂಗಳೂರಿನ ವೆಸ್ಟ್ ಎಂಡ್ ಕೋರ್ಟ್, ತಾಜ್ ವೆಸ್ಟ್ ಎಂಡ್ ಇಲ್ಲಿ ಹಮ್ಮಿಕೊಳ್ಳಲಾಗಿದೆ.

ಭಾರತದ ಗೌರವಾನ್ವಿತ ಉಪರಾಷ್ಟ್ರಪತಿಗಳಾದ ಎಂ.ವೆಂಕಯ್ಯನಾಯ್ಡು ಅವರು ದಿನಾಂಕ: 17–11–2021 ರಂದು ಬೆಳಿಗ್ಗೆ 10 ಗಂಟೆಗೆ ಸಮಾರಂಭದ ಉದ್ಘಾಟನೆ ಮಾಡಲಿರುವರು. ರಾಜ್ಯದ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ವಿಶೇಷ ಅತಿಥಿಗಳಾಗಿ ಕೇಂದ್ರ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರಾದ ರಾಜೀವ್ ಚಂದ್ರಶೇಖರ್, ರಾಜ್ಯದ ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರಾದ ಡಾ.ಸಿ.ಎನ್. ಅಶ್ವಥ್‌ನಾರಾಯಣ್, ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಮುರುಗೇಶ್ ಆರ್ ನಿರಾಣಿ, ಸರ್ಕಾರದ ಮುಖ್ಯ

ಕಾರ್ಯದರ್ಶಿಗಳಾದ ಪಿ.ರವಿಕುಮಾರ್ ಸೇರಿದಂತೆ ಹಲವಾರು ಗಣ್ಯರು ಹಾಗೂ ಹಿರಿಯ ಅಧಿಕಾರಿಗಳು ಸಮಾವೇಶದಲ್ಲಿ ಭಾಗವಹಿಸಲಿರುವರು.

## ಗಣಿ ಮತ್ತು ಭೂವಿಜ್ಞಾನ ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ):

ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕೊಪ್ಪಳ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಆಚಾರ ಹಾಲಪ್ಪ ಬಸಪ್ಪ ಅವರು ನವೆಂಬರ್ 17 ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಸತಿ ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ):

ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ನವೆಂಬರ್ 17 ರಂದು ಕಲಬುರಗಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಶಿಮ್ಲಾದಲ್ಲಿ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮಾವೇಶ
## ಸಭಾಪತಿ ಬಸವರಾಜ ಹೊರಟ್ಟಿ ಭಾಗಿ

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ):

ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ನವೆಂಬರ್ 17, 2021 ರಿಂದ ನವೆಂಬರ್ 18, 2021 ರ ವರೆಗೆ ಎರಡು ದಿನಗಳ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮಾವೇಶ ಹಾಗೂ ಶತಮಾನೋತ್ಸವ ಸಮಾರಂಭದಲ್ಲಿ ಕರ್ನಾಟಕ ರಾಜ್ಯ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಪಾಲ್ಗೊಳ್ಳಲಿದ್ದಾರೆ.

ಬೆಂಗಳೂರಿನಿಂದ ಶಿಮ್ಲಾಕ್ಕೆ ಇಂದು ಪ್ರಯಾಣ ಬೆಳೆಸಿರುವ ಅವರು ೮೨ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮ್ಮೇಳದನಲ್ಲಿ ಭಾಗವಹಿಸಿ ತಮ್ಮ ವಿಚಾರಧಾರೆಗಳನ್ನು ಮಂಡಿಸಲಿದ್ದಾರೆ.

"ಸಂವಿಧಾನ, ಸದನ ಮತ್ತು ನಾಗರೀಕರ ಬಗೆಗೆ ಪೀಠಾಸೀನಾಧಿಕಾರಿಗಳ ಹೊಣೆಗಾರಿಕೆ" ಕುರಿತು ವಿಷಯ ಮಂಡಿಸಲಿರುವ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ತಮ್ಮ 42 ವರ್ಷಗಳ ಸುದೀರ್ಘ ರಾಜಕೀಯ ಅನುಭವ, ಏಳು ಬಾರಿ ವಿಧಾನ ಪರಿಷತ್ತಿನ ಸದಸ್ಯರಾಗಿ ಸದನದ ಒಳಗಡೆ ಮತ್ತು ಹೊರಗಡೆಯ ಕಾರ್ಯನಿರ್ವಹಣೆ, ನಿರ್ವಹಿಸಿದ ಜವಾಬ್ಧಾರಿ ಹಾಗೂ ಸಾರ್ವಜನಿಕ ಬದುಕಿನಲ್ಲಿ ಜನಪ್ರತಿನಿಧಿಗಳ ನಡವಳಿಕೆ ಕುರಿತು ತಮ್ಮ ವಿಚಾರಧಾರೆಗಳನ್ನು ಹಂಚಿಕೊಳ್ಳಲಿದ್ದಾರೆ.

೮೨ನೇ ಪೀಠಾಸೀನಾಧಿಕಾರಿಗಳ ಸಮ್ಮೇಳನವನ್ನು ಲೋಕಸಭಾಧ್ಯಕ್ಷರಾದ ಓಂ ಬಿರ್ಲಾ ಅವರು ಉಧ್ಘಾಟಿಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಸಮಾವೇಶವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ರಾಜ್ಯ ಸಭೆಯ ಉಪಸಭಾಪತಿ, ಹಿಮಾಚಲ ಪ್ರದೇಶದ ರಾಜ್ಯಪಾಲರು, ವಿಧಾನಸಭಾಧ್ಯಕ್ಷರು ಮತ್ತು ಹಿಮಾಚಲ ಪ್ರದೇಶದ ಮುಖ್ಯಮಂತ್ರಿ ಸೇರಿದಂತೆ ವಿವಿಧ ರಾಜ್ಯಗಳ ವಿಧಾನ ಸಭಾಧ್ಯಕ್ಷರು, ಸಭಾಪತಿಗಳು ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ.

ಇದೇ ವೇಳೆ ಪೀಠಾಸೀನ ಅಧಿಕಾರಿಗಳ ಸಾರ್ವಜನಿಕ ಜವಾಬ್ದಾರಿ ಕುರಿತು ವಿಸ್ತೃತ ಚರ್ಚೆ ನಡೆಯಲಿದೆ.

ಗುರುವಾರ ನಡೆಯುವ ಸಮಾರೋಪ ಸಮಾರಂಭದಲ್ಲಿ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ, ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವರಾದ ಅನುರಾಗ ಠಾಕೂರ ಅವರು ಪಾಲ್ಗೊಳ್ಳಲಿದ್ದಾರೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ):

**ದಿನಾಂಕ: 16.11.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶು ವೈದ್ಯಕೀಯ ಕಾಲೇಜು, ಹೆಬ್ಬಾಳ | 45 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 47 | ಉತ್ತಮ | $O_3$ |
| 3 | ಕವಿಕ, ಮೈಸೂರುರಸ್ತೆ | 84 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿ ಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 58 | ತೃಪ್ತಿಕರ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | * | * | * |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 38 | ಉತ್ತಮ | CO |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 35 | ಉತ್ತಮ | CO |
| **(16.11.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 50 | ಉತ್ತಮ | $NO_2$ |
| 9 | ಪೀಣ್ಯ | 51 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | 89 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |

| | |
|---|---|
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 16.11.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 45 | Good | $PM_{10}$ |
| 2 | Jayanagar 5th Block, Shalini ground | 47 | Good | $O_3$ |
| 3 | KAVIKA, Mysore Road | 84 | Satisfactory | CO |
| 4 | Rajeev Gandhi Institute of Chest Disease, NIMHANS, Hombegowda Nagar | 58 | Satisfactory | CO |
| 5 | HSR Layout, near Central Silkboard | * | * | * |
| 6 | City Railway Station, Magestic, Bengaluru | 38 | Good | CO |
| 7 | Saneguruvanahalli, NisargaBhavan, KSPCB, Shivanagara | 35 | Good | CO |
| **(16.11.2021 at 10.05 AM)** | | | | |
| 8 | BWSSB, Kadabesanahalli | 50 | Good | $NO_2$ |
| 9 | Peenya | 51 | Satisfactory | $PM_{2.5}$ |
| 10 | BTM Layout | 89 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |